# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1031(1295)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಅರಣ್ಯ ಇಲಾಖೆ ಜಮೀನಿನ ಬಗ್ಗೆ

(ಅ) ರಾಮನಗರ ಜಿಲ್ಲಾ ವ್ಯಾಪ್ತಿಯ ಕಂದಾಯ ಇಲಾಖೆಯ ಸಿ ಮತ್ತು ಡಿ ವರ್ಗದ ಯಾವ ಯಾವ ಸರ್ವೆ ನಂಬರ್ ಜಮೀನುಗಳನ್ನು ಅರಣ್ಯ ಇಲಾಖೆಗೆ ಹಸ್ತಾಂತರಿಸಲು ಅರಣ್ಯ ಕಾಯ್ದೆ ಸೆಕ್ಷನ್ 4 ರಡಿಯಲ್ಲಿ ಅಧಿಸೂಚನೆ ಹೊರಡಿಸಲಾಗಿದೆ; (ಗ್ರಾಮವಾರು ವಿವರ ನೀಡುವುದು)

(ಆ) ಅರಣ್ಯ ಕಾಯ್ದೆ ಸೆಕ್ಷನ್ 4 ರಡಿಯಲ್ಲಿ ಅಧಿಸೂಚನೆ ಹೊರಡಿಸಿದ ನಂತರ ಎಷ್ಟು ಜಮೀನುಗಳನ್ನು ಸೆಕ್ಷನ್ 17 ರಡಿಯಲ್ಲಿ ಅಂತಿಮ ಅಧಿಸೂಚನೆ ಹೊರಡಿಸಿ ಅರಣ್ಯ ಇಲಾಖೆಗೆ ಹಸ್ತಾಂತರಿಸಲಾಗಿದೆ; (ಗ್ರಾಮವಾರು ವಿವರ ನೀಡುವುದು)

(ಇ) ಸಿ ಮತ್ತು ಡಿ ವರ್ಗದ ಜಮೀನುಗಳನ್ನು ಅರಣ್ಯ ಕಾಯ್ದೆ ಸೆಕ್ಷನ್ 4 ರಡಿಯಲ್ಲಿನ ಅಧಿಸೂಚನೆ ಹೊರಡಿಸುವ ಸಂಬಂಧ ಉಪವಿಭಾಗಾಧಿಕಾರಿಗಳನ್ನು ಫಾರೆಸ್ಟ್ ಸೆಟಲ್‌ಮೆಂಟ್ ಅಧಿಕಾರಿಯಾಗಿ ಸರ್ಕಾರವು ನೇಮಿಸಿದ್ದು, ಉಪವಿಭಾಗಾಧಿಕಾರಿಗಳವರು ಈವರೆವಿಗೂ ವಿಚಾರಣೆ ನಡೆಸಿ ಎಷ್ಟು ಜಮೀನನ್ನು ಅರಣ್ಯ ಕಾಯ್ದೆ ಸೆಕ್ಷನ್ 17 ರಡಿಯಲ್ಲಿ ಅಂತಿಮ ಅಧಿಸೂಚನೆ ಹೊರಡಿಸಲು ತೀರ್ಮಾನಿಸಿ ಹಾಗೂ ತಿರಸ್ಕರಿಸಲು ತೀರ್ಮಾನಿಸಲಾಗಿರುವ ಜಮೀನು ಎಷ್ಟು;

(ಈ) ಅರಣ್ಯ ಕಾಯ್ದೆ ಸೆಕ್ಷನ್ 4 ರಡಿಯಲ್ಲಿ ಪ್ರಾಥಮಿಕ ಅಧಿಸೂಚನೆ ಹೊರಡಿಸಿರುವ ಸುಮಾರು 15 ರಿಂದ 20 ವರ್ಷ ಕಳೆದರೂ ಸೆಕ್ಷನ್ 17 ರಡಿಯಲ್ಲಿ ಅಂತಿಮ ಅಧಿಸೂಚನೆ ಹೊರಡಿಸದೇ ದೀರ್ಘ ಕಾಲದ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ವಿಳಂಬವಾಗಿರುವ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಲು ಸರ್ಕಾರ ತೆಗೆದುಕೊಂಡಿರುವ ನಿಲುವೇನು;

(ಊ) ಈಗಾಗಲೇ ಅರಣ್ಯ ಕಾಯ್ದೆ ಸೆಕ್ಷನ್ 4 ರಡಿಯಲ್ಲಿ ಪ್ರಾಥಮಿಕ ಅಧಿಸೂಚನೆ ಹೊರಡಿಸಿರುವ ಹಲವು ಸರ್ವೆ ನಂಬರ್ ಜಮೀನುಗಳು ಅರಣ್ಯ ಲಕ್ಷಣಗಳನ್ನು ಕಳೆದುಕೊಂಡಿದ್ದು, ಸದರಿ ಜಮೀನನ್ನು ಕಂದಾಯ ಇಲಾಖೆಗೆ ವಾಪಸ್ಸು ಪಡೆಯಲು ಸರ್ಕಾರವು ತೀರ್ಮಾನ ಕೈಗೊಳ್ಳುವುದೇ?